ಪಿ.ಡಬ್ಲ್ಯೂ 01

<u>ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು</u>

ನಾನು ಈ ದಾವೆಯಲ್ಲಿ ವಾದಿಯಾಗಿದ್ದು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆಸಿರುವ ಅಂಶಗಳು ಸರಿ ಹಾಗೂ ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

<u>ಮುಂದುವರಿದ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ</u>

ದಾವಾ ಸ್ವತ್ತಿನ ಕರಆಕಾರಣೆಯ ರಿಜಿಸ್ಟರ್ ನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. 2006 ಮತ್ತು 2007 ನೇ ಸಾಲಿನ ಆಶ್ರಯ ಯೋಜನೆ ಅಡಿಯಲ್ಲಿ ಮಂಜೂರಾದ ಮನೆಗಳ ಪಾಲಾನುಭವಿಗಳ ಪಟ್ಟಿಯ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ 5 ಭಾವಚಿತ್ರ ಮತ್ತು ಸಿಡಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ರಿಂದ 7 ಎಂದು ಸಿಡಿಯನ್ನು ನಿಪಿ-8 ಎಂದು ಗುರುತಿಸಲಾಯಿತು. 2005-06 ಮತ್ತು 2014-15 ನೇ ಸಾಲಿನ ಕರಆಕಾರಣೆಯ ರಿಜಿಸ್ಟರ ನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-9 ಮತ್ತು 10 ಎಂದು ಗುರುತಿಸಲಾಯಿತು. ಕಟ್ಟಡ ಪರವಾನಿಗೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು. 7 ಕಂದಾಯ ರಶೀದಿಗಳನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-12 ರಿಂದ 18 ಎಂದು ಗುರುತಿಸಲಾಯಿತು. ಒಂದು ಪೊಲೀಸ್ ಹಿಂಬರಹವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-19 ಎಂದು ಗುರುತಿಸಲಾಯಿತು. 2006 ಮತ್ತು 2007 ನೇ ಸಾಲಿನ ಗ್ರಾಮಪಂಚಾಯಿತಿಯ ದಾವಾ ಸ್ವತ್ತಿನ ತೆರಿಗೆ ಬೇಡಿಕೆಯ ರಿಜಿಸ್ಟರ್ ನ ಯಥಾಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-20 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದು ಕಾಲವಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿಂದೆ,

ಪ್ರಧಾನ ಸಿವಿಲ್ ಮತ್ತು
ಜೆ.ಎಂ.ಎಫ್.ಸಿ ನ್ಯಾಯಾಧೀಶರು, ಚಳ್ಳಕೆರೆ.